# All India Radio: Bangalore
# National Bulletins In Kannada
# 09.06.2025 / 19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**09.06.2025 / 19.35 hrs**

**<><*<><>*><>**

ಮುಖ್ಯಾಂಶಗಳು

**೧. ಬಾಹ್ಯಾಕಾಶ ಕ್ಷೇತ್ರದಲ್ಲಿ ಭಾರತ ಹೊಸ ಮೈಲಿಗಲ್ಲು; ಗಗನಯಾತ್ರಿ ಶುಭಾಂಶು ಶುಕ್ಲಾ ನಾಳೆ ಬಾಹ್ಯಾಕಾಶ ನಿಲ್ದಾಣಕ್ಕೆ ಪ್ರಯಾಣ**

**೨. ಕೇಂದ್ರ ಸಚಿವ ಪಿಯೂಷ್ ಗೋಯಲ್ ಇಂದಿನಿಂದ ಸ್ವಿಟ್ಜರ್ಲೆಂಡ್, ಸ್ವಿಡನ್ ಪ್ರವಾಸ; ದ್ವಿಪಕ್ಷೀಯ ವ್ಯಾಪಾರ, ಹೂಡಿಕೆ ಕುರಿತಂತೆ ಚರ್ಚೆ**

**೩. ನಮೋ ಆಪ್ ಸಮೀಕ್ಷೆಯಲ್ಲಿ ಭಾಗವಹಿಸುವಂತೆ ದೇಶದ ಜನತೆಗೆ ಪ್ರಧಾನಿ ನರೇಂದ್ರ ಮೋದಿ ಕರೆ**

**೪. ದಿವ್ಯಾಂಗರ ವಾಹನಗಳಿಗೆ ಜಿಎಸ್‌ಟಿ ರಿಯಾಯಿತಿ; ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅಧಿಕಾರಗಳೊಂದಿಗೆ ಪ್ರಗತಿ ಪರಿಶೀಲನೆ**

**<><*<><>*><>**

ಭಾರತೀಯ ಗಗನಯಾತ್ರಿ ಹಾಗೂ ಭಾರತೀಯ ವಾಯುಪಡೆಯ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ನಾಳೆ ಸಂಜೆ ಸ್ಪೇಸ್ ಎಕ್ಸ್‌ನ ಆಕ್ಸಿಯಮ್-೪ ಮಿಷನ್‌ನಲ್ಲಿ ತಮ್ಮ ಮೊದಲ ಬಾಹ್ಯಾಕಾಶ ಪ್ರಯಾಣ ನಡೆಸಲಿದ್ದಾರೆ. ಅಮೆರಿಕದ ಫ್ಲೋರಿಡಾದಲ್ಲಿರುವ ನಾಸಾದ ಕೆನಡಿ ಬಾಹ್ಯಾಕಾಶ ಕೇಂದ್ರದಿಂದ ನಾಳೆ ಭಾರತೀಯ ಕಾಲಮಾನ ಸಂಜೆ ೫ ಗಂಟೆ ೫೨ ನಿಮಿಷಕ್ಕೆ ಪ್ರಯಾಣ ಪ್ರಾರಂಭಿಸಲಿದ್ದಾರೆ. ಅವರು ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ೧೫ ದಿನಗಳ ಕಾಲ ಇರಲಿದ್ದಾರೆ. ಈ ಮೂಲಕ ಹೊಸ ಮೈಲಿಗಲ್ಲು ಸಾಧಿಸಲು ಭಾರತ ಸಜ್ಜಾಗಿದೆ. ೨೦೨೦ರಲ್ಲಿ ಕಾರ್ಯಾಚರಣೆಗೆ ಶುಭಾಂಶು ಶುಕ್ಲಾ ಅವರನ್ನು ಆಯ್ಕೆ ಮಾಡಲಾಗಿತ್ತು. ನಂತರ ಅವರು ವಿವಿಧ ಬಾಹ್ಯಾಕಾಶ ಕೇಂದ್ರಗಳಲ್ಲಿ ಕಠಿಣ ತರಬೇತಿ ಪಡೆದ ಬಳಿಕ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಸೇರಿದ ಭಾರತದ ಮೊದಲ ಗಗನಯಾತ್ರಿಯಾಗಿ ನಾಮನಿರ್ದೇಶನಗೊಂಡಿದ್ದಾರೆ.

**ಧ್ವನಿ: ಶುಭಾಂಶು ಶುಕ್ಲಾ ( ೨೨ ಸೆಕೆಂಡ್ಸ್)**

೧೪೦ ಕೋಟಿ ಭಾರತೀಯರನ್ನು ಪ್ರತಿನಿಧಿಸಲಿರುವ ಶುಕ್ಲಾ ಅವರೊಂದಿಗೆ ಅಮೆರಿಕದ ಸಂಶೋಧಕಿ ಡಾ. ಪೆಗ್ಗಿ ವಾಟ್ಸನ್, ಪೋಲೆಂಡ್‌ನ ವಿಜ್ಞಾನಿ ಸ್ಲಾವೋಸ್ಜ್ ಉಜ್ನಾನ್ಸ್ಕಿ ಮತ್ತು ಹಂಗೇರಿಯ ಮೆಕ್ಯಾನಿಕಲ್ ಎಂಜಿನಿಯರ್ ಟಿಬೋರ್ ಕಪು ಕೆಳ ಭೂಮಿಯ ಕಕ್ಷೆಗೆ ಮಾರ್ಗವನ್ನು ಮರು ವ್ಯಾಖ್ಯಾನಿಸುವ ಐತಿಹಾಸಿಕ ಕಾರ್ಯಾಚರಣೆಯಲ್ಲಿ ಬಾಹ್ಯಾಕಾಶಕ್ಕೆ ಪ್ರಯಾಣಿಸುತ್ತಿದ್ದಾರೆ. ಬಾಹ್ಯಾಕಾಶ ನಿಲ್ದಾಣದಲ್ಲಿ ೧೪ ದಿನಗಳ ವಾಸ್ತವ್ಯದ ಅವಧಿಯಲ್ಲಿ ಮಾನವ ಸಂಶೋಧನೆ, ಭೂಮಿಯ ಮೇಲೆ ಕೇಂದ್ರೀಕರಿಸುವ ೬೦ ಕ್ಕೂ ಹೆಚ್ಚು ವೈಜ್ಞಾನಿಕ ಪ್ರಯೋಗಗಳು ಮತ್ತು ಪ್ರದರ್ಶನಗಳನ್ನು ನಡೆಸಲಿದ್ದಾರೆ. ಅಂತರರಾಷ್ಟ್ರೀಯ ವೀಕ್ಷಣೆ ಮತ್ತು ಜೀವನ, ಜೈವಿಕ ಮತ್ತು ವಸ್ತು ವಿಜ್ಞಾನಗಳ ಕುರಿತಂತೆ ವಿಜ್ಞಾನಿಗಳ ತಂಡ ಅಧ್ಯಯನ ನಡೆಸಲಿದೆ.

**<><*<><>*><>**

ಭಾರತದ ಆರ್ಥಿಕ ಮತ್ತು ವ್ಯಾಪಾರ ಪಾಲುದಾರಿಕೆಗಳನ್ನು ಬಲಪಡಿಸಲು ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್, ಇಂದಿನಿಂದ ಸ್ವಿಟ್ಜರ್ಲೆಂಡ್ ಮತ್ತು ಸ್ವೀಡನ್ ಪ್ರವಾಸ ಕೈಗೊಂಡಿದ್ದಾರೆ.  ದ್ವಿಪಕ್ಷೀಯ ವ್ಯಾಪಾರ ಮತ್ತು ಹೂಡಿಕೆ ಉತ್ತೇಜಿಸಲು ಸ್ವಿಟ್ಜರ್‌ಲ್ಯಾಂಡ್‌ನಲ್ಲಿ ಜಾಗತಿಕ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಕೈಗಾರಿಕಾ ಉದ್ಯಮಿಗಳೊಂದಿಗೆ ಚರ್ಚೆ ನಡೆಸಲಿದ್ದಾರೆ. ಪಿಯೂಶ್ ಗೋಯಲ್ ಸ್ವೀಡನ್‌ನಲ್ಲಿ ನಡೆಯಲಿರುವ ಆರ್ಥಿಕ, ಕೈಗಾರಿಕಾ ಮತ್ತು ವೈಜ್ಞಾನಿಕ ಸಹಕಾರಕ್ಕಾಗಿ ಭಾರತ-ಸ್ವೀಡನ್ ಜಂಟಿ ಆಯೋಗದ ೨೧ ನೇ ಅಧಿವೇಶನದ ಸಹ-ಅಧ್ಯಕ್ಷರಾಗಲಿದ್ದಾರೆ. ಯುರೋಪಿಯನ್ ರಾಷ್ಟ್ರಗಳೊಂದಿಗೆ ಕಾರ್ಯತಂತ್ರದ ಮತ್ತು ಆರ್ಥಿಕ ಪಾಲುದಾರಿಕೆಗಳನ್ನು ಇನ್ನಷ್ಟು ವೃದ್ಧಿಸಲು ಹಾಗೂ  ಬಲವಾದ ವ್ಯಾಪಾರ ಮತ್ತು ಹೂಡಿಕೆ ಸಂಬಂಧಗಳನ್ನು ಮುನ್ನಡೆಸುವಲ್ಲಿ ಈ ಭೇಟಿ ಮಹತ್ವ ಪಡೆದುಕೊಂಡಿದೆ.

**<><*<><>*><>**

ಕಳೆದ ೧೧ ವರ್ಷಗಳಲ್ಲಿ ಭಾರತದ ಬೆಳವಣಿಗೆಯ ಕುರಿತು ನಮೋ ಆಪ್‌ನಲ್ಲಿ ನಡೆಯುತ್ತಿರುವ ಸಮೀಕ್ಷೆಯಲ್ಲಿ ಎಲ್ಲರೂ ಭಾಗವಹಿಸಬೇಕೆಂದು ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದ್ದಾರೆ. ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್ ನಲ್ಲಿ, ಕಳೆದ ೧೧ ವರ್ಷಗಳಲ್ಲಿ ಭಾರತದ ಅಭಿವೃದ್ಧಿಯ ಕುರಿತು ಜನ್ ಮನ್ ಸಮೀಕ್ಷೆಯಲ್ಲಿ ಭಾಗವಹಿಸಬಹುದಾದ ಪೋರ್ಟಲ್‌ನ ಲಿಂಕ್ ಅನ್ನು ಪ್ರಧಾನಿ ಹಂಚಿಕೊಂಡಿದ್ದಾರೆ.

**<><*<><>*><>**

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರ ೧೧ ವರ್ಷಗಳ ಅವಧಿಯಲ್ಲಿ ದೇಶವು ಆರ್ಥಿಕ ಪುನರುಜ್ಜೀವನ, ಸಾಮಾಜಿಕ ನ್ಯಾಯ ಮತ್ತು ರಾಷ್ಟ್ರೀಯ ಭದ್ರತೆಯ ಹೊಸ ಯುಗಕ್ಕೆ ಸಾಕ್ಷಿಯಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮ

ಪೋಸ್ಟ್‌ನಲ್ಲಿ ತಿಳಿಸಿರುವ ಅವರು, ನಾಯಕತ್ವವು ಸ್ಪಷ್ಟವಾಗಿದ್ದರೆ ಹಾಗೂ ದೃಢ ನಿಶ್ಚಯದಿಂದ ಕೂಡಿದ್ದರೆ, ಸೇವೆ, ಭದ್ರತೆ ಮತ್ತು ಉತ್ತಮ ಆಡಳಿತದಲ್ಲಿ ಹೊಸ ಮೈಲಿಗಲ್ಲು ಸಾಧಿಸಲಾಗುತ್ತದೆ. ಇದನ್ನು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಸಾಬೀತುಪಡಿಸಿದೆ ಎಂದು ಹೇಳಿದ್ದಾರೆ. ರೈತರು, ಮಹಿಳೆಯರು, ಪರಿಶಿಷ್ಟರು ಮತ್ತು ಹಿಂದುಳಿದವರನ್ನು ಆಡಳಿತದ ಕೇಂದ್ರಕ್ಕೆ ತರುವಲ್ಲಿ ಪ್ರಧಾನಿ ಯಶಸ್ವಿಯಾಗಿದ್ದಾರೆ ಎಂದು ಅಭಿಪ್ರಾಯಪಟ್ಟಿದ್ದಾರೆ.

**<><*<><>*><>**

ದಿವ್ಯಾಂಗರ ವಾಹನಗಳಿಗೆ ಜಿಎಸ್‌ಟಿ ರಿಯಾಯಿತಿ ಸೌಲಭ್ಯದ ಕುರಿತಂತೆ ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್.ಡಿ. ಕುಮಾರಸ್ವಾಮಿ ಇಂದು ಹಿರಿಯ ಅಧಿಕಾರಿಗಳ ಜೊತೆ ಸಭೆ ನಡೆಸಿ ಪ್ರಗತಿ ಪರಿಶೀಲನೆ ನಡೆಸಿದರು. ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿಯ ಪರಿಣಾಮವಾಗಿ ದಿವ್ಯಾಂಗರು ಬಳಸುವ ವಾಹನಗಳಿಗೆ ಶೇಕಡ ೧೦ರಷ್ಟು ಜಿಎಸ್‌ಟಿ ರಿಯಾಯಿತಿ ನೀಡಲಾಗಿದೆ. ಪ್ರತಿ ತಿಂಗಳು ಕನಿಷ್ಠ ೩೦೦ ಅರ್ಜಿಗಳನ್ನು ವಿಲೇವಾರಿ ಮಾಡಲಾಗುತ್ತಿದೆ. ಇದು ದಿವ್ಯಾಂಗರ ಸಶಕ್ತೀಕರಣ ಹಾಗೂ ಘನತೆಯುತ ಜೀವನಕ್ಕೆ ಸಹಕಾರಿಯಾಗಿದ್ದು, ಆತ್ಮನಿರ್ಭರ ಭಾರತದ ಸಾಕಾರ ರೂಪ ಎಂದು ಕುಮಾರಸ್ವಾಮಿ ತಮ್ಮ ಸಾಮಾಜಿಕ ಜಾಲತಾಣದಲ್ಲಿ ವಿಶ್ಲೇಷಿಸಿದ್ದಾರೆ. ಇದೇ ವೇಳೆ ಎನ್‌ಡಿಎ ೧೧ ವರ್ಷ ಪೂರೈಸಿರುವುದಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಕುಮಾರಸ್ವಾಮಿ ಅಭಿನಂದಿಸಿದ್ದಾರೆ. ವಿಕಸಿತ ಭಾರತದ ಸಂಕಲ್ಪಕ್ಕೆ ಹಾಗೂ ದೇಶದ ಭವಿಷ್ಯಕ್ಕಾಗಿ ಪ್ರಧಾನಿ ಅವರು ಅವಿರತ ಹಾಗೂ ದಣಿವರಿಯದೆ ಶ್ರಮಿಸುತ್ತಿದ್ದಾರೆ ಎಂದಿದ್ದಾರೆ.

**<><*<><>*><>**

ಕಳೆದ ಒಂದು ದಶಕದಲ್ಲಿ ಭಾರತ, ಸರ್ವತೋಮುಖವಾಗಿ ಗಮನಾರ್ಹ ಬದಲಾವಣೆಯನ್ನು ಕಂಡಿದ್ದು, ಸೇವೆ, ಸುಶಾಸನ ಮತ್ತು ಬಡವರ ಕಲ್ಯಾಣದ ತತ್ವದಡಿ ಮುನ್ನಡೆಯುತ್ತಿದೆ. ಕೇಂದ್ರ ಸರ್ಕಾರ ಕಳೆದ ೧೧ ವರ್ಷಗಳಲ್ಲಿ ಕೈಗೊಂಡಿರುವ ಹಲವು ಪ್ರಮುಖ ಪ್ರಯತ್ನಗಳ ಕುರಿತು ಆಕಾಶವಾಣಿ ಸುದ್ದಿ ವಿಭಾಗ ವಿಶೇಷ ವರದಿಯನ್ನು ಪ್ರಸಾರ ಮಾಡುತ್ತಿದೆ. ಈ ಮಾಲಿಕೆಯಲ್ಲಿ ಇಂದು, 'ಈಶಾನ್ಯ ಭಾರತದ ಅಭಿವೃದ್ಧಿಯೆಡೆಗಿನ ಒಂದು ಪಯಣ' ಎಂಬುದರ ಕುರಿತ ವರದಿ ಇಲ್ಲಿದೆ.

**ವರದಿ... ವಿಮಲಾಕ್ಷಿ ( ೧ ನಿಮಿಷ ೧೫ ಸೆಕೆಂಡ್)**

ಈಶಾನ್ಯ ಭಾರತ ಒಂದು ಕಾಲದಲ್ಲಿ ದೂರದಲ್ಲಿ ಕಾಣುತ್ತಿದ್ದ ಪ್ರದೇಶವಾಗಿತ್ತು. ಇದೀಗ ಕೇಂದ್ರ ಸರ್ಕಾರದ ಹಲವು ಯೋಜನೆಗಳಿಂದ ಸಂಪರ್ಕ ಮತ್ತು ಪ್ರಗತಿಯ ಸಂಕೇತವಾಗಿ ಅಭಿವೃದ್ಧಿ

ಹೊಂದುತ್ತಿದೆ. ಕಳೆದ ಹನ್ನೊಂದು ವರ್ಷಗಳಲ್ಲಿ ಕೇಂದ್ರ ಸರ್ಕಾರವು ಈಶಾನ್ಯ ರಾಜ್ಯಗಳಲ್ಲಿ ಮೂಲಸೌಕರ್ಯದಲ್ಲಿ ಮಾತ್ರವಲ್ಲದೆ, ಜನರ ಮೂಲಕವೂ ಹೂಡಿಕೆ ಮಾಡಿದೆ. 'ಪಿಎಂ ಡೆವೈನ್' ಹಾಗೂ 'ಈಶಾನ್ಯ ವಿಶೇಷ ಮೂಲಸೌಕರ್ಯ ಅಭಿವೃದ್ಧಿ ಯೋಜನೆ' ಮತ್ತು ಮಹತ್ವಾಕಾಂಕ್ಷೆಯ ಯೋಜನೆಗಳು ತಳಮಟ್ಟದಲ್ಲಿ ಪ್ರಗತಿಯನ್ನು ವೇಗಗೊಳಿಸಿದೆ. 'ವನಧನ್ ಯೋಜನೆ'ಯ ಮೂಲಕ ೩ ಲಕ್ಷಕ್ಕೂ ಹೆಚ್ಚು ಬುಡಕಟ್ಟು ಜನಾಂಗದವರನ್ನು ಬೆಂಬಲಿಸಲಾಗಿದೆ. ೪೩೪ ರೈತ ಉತ್ಪಾದಕ ಕಂಪನಿಗಳು ಸಂಘಟಿತ ಕೃಷಿ ವ್ಯವಹಾರವನ್ನು ಬೆಂಬಲಿಸುವ ಮೂಲಕ ೨ ಲಕ್ಷಕ್ಕೂ ರೈತರಿಗೆ ಪ್ರಯೋಜನ ನೀಡಿದೆ. ಸಾವಯವ ಉತ್ಪನ್ನಗಳು, ಖಾದ್ಯ ತೈಲ, ಬಿದಿರು, ಎರಿ ರೇಷ್ಮೆಯಂತಹ ಸಾಂಪ್ರದಾಯಿಕ ಉತ್ಪನ್ನಗಳ ಕೇಂದ್ರವಾಗಿ ಹೊರಹೊಮ್ಮಿದೆ. **NEHHDC** ಮತ್ತು **NERAMAC** ಮಾರುಕಟ್ಟೆ ಪ್ರವೇಶವನ್ನು ವಿಸ್ತರಿಸಿವೆ, ಸ್ಥಳೀಯ ಕುಶಲಕರ್ಮಿಗಳು ಮತ್ತು ನೇಕಾರರು ವಿನ್ಯಾಸ ಬೆಂಬಲ, ಬ್ರ್ಯಾಂಡಿಂಗ್ ಮತ್ತು ರಾಷ್ಟ್ರೀಯ ವೇದಿಕೆಗಳಿಂದ ಪ್ರಯೋಜನ ಪಡೆಯುತ್ತಿದ್ದಾರೆ. ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರದಲ್ಲಿ ಗಮನಾರ್ಹ ಸಾಧನೆಯಾಗಿದ್ದು, ಸಾಕ್ಷರತಾ ಪ್ರಮಾಣದಲ್ಲಿ ಏರಿಕೆಯಾಗಿದೆ. ಉಲ್ಲಾಸ್ ಮಿಷನ್ ಅಡಿಯಲ್ಲಿ ಮಿಜೋರಾಂ ಅನ್ನು ಸಂಪೂರ್ಣ ಸಾಕ್ಷರತಾ ರಾಜ್ಯ ಎಂದು ಘೋಷಿಸಲಾಗಿದೆ. ೧೫ ಆಸ್ಪತ್ರೆಗಳ ಮೂಲಕ ಅಸ್ಸಾಂ ದಕ್ಷಿಣ ಏಷ್ಯಾದ ಅತಿದೊಡ್ಡ ಕ್ಯಾನ್ಸರ್ ಆರೈಕೆ ಜಾಲವನ್ನು ಹೊಂದಿದೆ. ಸಾಂಸ್ಕೃತಿಕ ಉತ್ಸವಗಳು, ವಸ್ತು ಸಂಗ್ರಹಾಲಯ ಯೋಜನೆಗಳು ಮತ್ತು ಅಸ್ಸಾಂನ ಮೊಯ್ದಮ್‌ಗಳಿಗೆ ಯುನೆಸ್ಕೋ ಟ್ಯಾಗ್‌ನಂತಹ ಜಾಗತಿಕ ಮನ್ನಣೆ ದೊರೆತಿದೆ. ಈಶಾನ್ಯ ರಾಜ್ಯಗಳು ದೇಶದ ತ್ವರಿತ ಬೆಳವಣಿಗೆಯಲ್ಲಿ ಪಾಲುದಾರರಾಗಿದ್ದು, ಅವಕಾಶಗಳಿಂದಲೂ ಸಮೃದ್ಧವಾಗುತ್ತಿದೆ. ಪ್ರತಿಯೊಂದು ಹಳ್ಳಿ, ಕಣಿವೆ ವೈವಿಧ್ಯತೆಯ ಮೂಲಕ ರಾಷ್ಟ್ರೀಯತೆಯಲ್ಲಿ ತನ್ನ ಸ್ಥಾನವನ್ನು ಸುಭದ್ರಗೊಳಿಸಿದೆ.

**<><*<><>*><>**

ಭಯೋತ್ಪಾದನೆಯನ್ನು ಎದುರಿಸುವಲ್ಲಿ ಭಾರತಕ್ಕೆ ಬೆಲ್ಜಿಯಂ ನೀಡಿರುವ ಬೆಂಬಲವನ್ನು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಸ್ವಾಗತಿಸಿದ್ದಾರೆ. ಬ್ರಸೆಲ್ಸ್‌ನಲ್ಲಿಂದು ಬೆಲ್ಜಿಯಂ ಉಪಪ್ರಧಾನಿ ಹಾಗೂ ವಿದೇಶಾಂಗ ಸಚಿವ ಮ್ಯಾಕ್ಸಿಮ್ ಪ್ರಿಪೋಟ್ ಅವರೊಂದಿಗೆ ಚರ್ಚೆ ನಡೆಸಿದ ಡಾ.ಎಸ್.ಜೈಶಂಕರ್, ಉಭಯ ದೇಶಗಳ ನಡುವಿನ ಸ್ನೇಹಪರ ಸಂಬಂಧಗಳನ್ನು ಶ್ಲಾಘಿಸಿದರು. ಇದು ಆರ್ಥಿಕ ಪಾಲುದಾರಿಕೆಯಲ್ಲೂ ಪ್ರತಿಫಲಿಸಲಿದೆ ಎಂದು ಪ್ರತಿಪಾದಿಸಿದರು. ಸಚಿವ ಡಾ.ಎಸ್. ಜೈಶಂಕರ್ ಜೂನ್ ೮ ರಿಂದ ೧೪ರವರೆಗೆ ಫ್ರಾನ್ಸ್, ಯೂರೋಪಿಯನ್ ಒಕ್ಕೂಟ ಮತ್ತು ಬೆಲ್ಜಿಯಂ ದೇಶಗಳಿಗೆ ಅಧಿಕೃತ ಭೇಟಿ ನೀಡುತ್ತಿದ್ದಾರೆ.

**<><*<><>*><>**

ಭಾರತವು, ವಿದೇಶದಲ್ಲಿರುವ ಭಾರತೀಯ ಮತದಾರರ ಹೆಚ್ಚಿನ ಭಾಗವಹಿಸುವಿಕೆಯನ್ನು ಸಕ್ರಿಯಗೊಳಿಸುವ ಆನ್‌ಲೈನ್ ಮತದಾರರ ನೋಂದಣಿ ವ್ಯವಸ್ಥೆಯನ್ನು ಹೊಂದಿದೆ ಎಂದು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ತಿಳಿಸಿದ್ದಾರೆ. ಸ್ವೀಡನ್‌ನಲ್ಲಿರುವ ಭಾರತೀಯ ವಲಸಿಗರೊಂದಿಗೆ ಸಂವಾದ ನಡೆಸಿ, ಮಾತನಾಡಿದ ಅವರು, ಚುನಾವಣೆಯಲ್ಲಿ ಭಾರತದ ಸಾಗರೋತ್ತರ ನಾಗರಿಕರು ಮತ್ತು ಅನಿವಾಸಿ ಭಾರತೀಯರ ಸಮಗ್ರ ಭಾಗವಹಿಸುವಿಕೆಯನ್ನು ಒತ್ತಿ ಹೇಳಿದ್ದಾರೆ. ಸ್ವೀಡನ್ ಸ್ಟಾಕ್‌ಹೋಮ್‌ನಲ್ಲಿ ನಾಳೆಯಿಂದ ಇದೇ ೧೨ರವರೆಗೆ ನಡೆಯಲಿರುವ ಚುನಾವಣಾ ಸಮಗ್ರತೆಗೆ ಸಮಕಾಲಿನ ಸವಾಲುಗಳ ಕುರಿತಾದ ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ ಭಾಗವಹಿಸಲಿರುವ ಅವರು, ಚುನಾವಣಾ ಭದ್ರತೆ, ತಪ್ಪು ಮಾಹಿತಿ, ಡಿಜಿಟಲ್ ಅಡ್ಡಿ, ಹವಾಮಾನ ಸಂಬಂಧಿತ ಅಪಾಯಗಳು ಮತ್ತು ಚುನಾವಣೆಗಳಲ್ಲಿ ಕೃತಕ ಬುದ್ಧಿಮತ್ತೆಯ ಪಾತ್ರಗಳ ಕುರಿತಂತೆ ಚರ್ಚೆ ನಡೆಸಲಿದ್ದಾರೆ.

**<><*<><>*><>**

ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ನಡೆದ ಕಾಲ್ತುಳಿತ ಪ್ರಕರಣ ಸಂಬಂಧ ದಾಖಲಾಗಿರುವ ಎಫ್‌ಐಆರ್ ರದ್ದುಕೋರಿ ಡಿಎನ್‌ಎ ಎಂಟರ್‌ಟೈನ್ಮೆಂಟ್ ಹಾಗೂ ರಾಯಲ್ ಚಾಲೆಂಜರ್ಸ್ ಸ್ಪೋರ್ಟ್ಸ್ ಪ್ರೈವೇಟ್ ಲಿಮಿಟೆಡ್ ಸಲ್ಲಿಸಿದ ಅರ್ಜಿಯ ವಿಚಾರಣೆಯನ್ನು ಹೈಕೋರ್ಟ್ ನಾಳೆಗೆ ಮುಂದೂಡಿದೆ.  ಈ ನಡುವೆ ಮುಖ್ಯಮಂತ್ರಿ ಸಿದ್ದರಾಮಯ್ಯ ನಾಳೆ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಹೈಕಮಾಂಡ್‌ಗೆ ವರದಿ ಸಲ್ಲಿಸಲಿದ್ದಾರೆ. ಈ ಹಿನ್ನೆಲೆಯಲ್ಲಿ ನವದೆಹಲಿಗೆ ತೆರಳಲಿದ್ದು, ಪಕ್ಷದ ವರಿಷ್ಠರನ್ನು ಭೇಟಿ ಮಾಡಿ ಮಾಹಿತಿ ನೀಡಲಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**